ಅತಿಥಿ ಉಪನ್ಯಾಸಕರನ್ನು ಖಾಯಂ ಮಾಡುವುದು

1358(592); ಶ್ರೀ ಬಣಕಾರ ಯು ಬಿ (ಹಿರೇಕೆರೂರು)

1) ರಾಜ್ಯದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು

2) ಈ ಕಾಲೇಜುಗಳಲ್ಲಿ ಇರುವ ಖಾಯಂ ಹಾಗೂ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು?

3) 1994ರಿಂದ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವವರ ಸಂಖ್ಯೆ ಎಷ್ಟು?

4) ಈ ಅತಿಥಿ ಉಪನ್ಯಾಸಕರನ್ನು ಖಾಯಂ ಮಾಡಲು ಸರಕಾರ ಕ್ರಮ ಕೈಗೊಳ್ಳುವುದೇ?

5) ಈ ಅತಿಥಿ ಉಪನ್ಯಾಸಕರನ್ನು ಖಾಯಂ ಮಾಡುವವರೆಗೆ ಈಗಿರುವ ಮಾಸಿಕ ಗೌರವಧನವನ್ನು ಹೆಚ್ಚಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಕಿಮ್ಮನೆ ರತ್ನಾಕರ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

1) 1203

2) ಖಾಯಂ ಉಪನ್ಯಾಸಕರುಗಳ ಸಂಖ್ಯೆ : 11378

ಪ್ರಸಕ್ತ ಶೈಕ್ಷಣಿಕ ವರ್ಷದ ಅತಿಥಿ

ಉಪನ್ಯಾಸಕರುಗಳ ಸಂಖ್ಯೆ : 1019

3) 12

4) ಇಲ್ಲ

ದಿನಾಂಕ:13–6–2014ರ ಸರ್ಕಾರದ ಆದೇಶ ಸಂಖ್ಯೆ ಇಡಿ 194ಎಸ್‌ಟಿಬಿ 2013ರಂತೆ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳಿಗೆ ಸ್ಥಳೀಯವಾಗಿ ಲಭ್ಯವಿರುವ ಅತಿಥಿ ಉಪನ್ಯಾಸಕರುಗಳನ್ನು ಕೇವಲ ಆ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಮಾತ್ರ ಗೌರವಧನದ ಆಧಾರದ

ಮೇಲೆ ನೇಮಿಸಿಕೊಳ್ಳುತ್ತಿರುವುದರಿಂದ ಖಾಯಂಗೊಳಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

5) ಈ ಹಿಂದೆ ನೀಡಲಾಗುತ್ತಿದ್ದ 4800 ರೂಗಳ ಗೌರವ ಧನವನ್ನು ದಿನಾಂಕ: 02–08–2012ರ ಸರ್ಕಾರದ ಆದೇಶ ಸಂಖ್ಯೆ: ಇಡಿ 125 ಯೋಯೋಕ 2012 ರಂತೆ 2012–13ನೇ ಸಾಲಿನಿಂದ ಮಾಸಿಕ ₹ 7000/– ಗಳಿಗೆ ಹೆಚ್ಚಿಸಲಾಗಿರುತ್ತದೆ. ಸದ್ಯಕ್ಕೆ ಈ ಗೌರವ ಧನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

1ನೇ ತರಗತಿಗೆ ಪ್ರವೇಶಾತಿ

1359(909); ಶ್ರೀ ಬಣಕಾರ್ ಯು.ಬಿ. (ಹಿರೇಕೆರೂರು)

ಅ) ಕಳೆದ 3 ವರ್ಷಗಳಲ್ಲಿ 1 ನೇ ತರಗತಿಗೆ ಪ್ರತಿ ವರ್ಷ ಸರ್ಕಾರಿ ಶಾಲೆಗೆ ಪ್ರವೇಶ ಪಡೆದ ಮಕ್ಕಳ ಸಂಖ್ಯೆ ಎಷ್ಟು?

ಆ) ಇತ್ತೀಚೆಗೆ ವರ್ಷಗಳಲ್ಲಿ 1 ನೇ ತರಗತಿಗೆ ಸರ್ಕಾರಿ ಶಾಲೆಗಳಲ್ಲಿ ಪ್ರವೇಶಾತಿ ಕಡಿಮೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಇ) ಬಂದಿದ್ದಲ್ಲಿ ಪ್ರವೇಶಾತಿ ಹೆಚ್ಚಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಶ್ರೀ ಕಿಮ್ಮನೆ ರತ್ನಾಕರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಶಿಕ್ಷಣ ಇಲಾಖೆಯ ಸರ್ಕಾರಿ ಶಾಲೆಗಳಲ್ಲಿ

2011–12 ನೇ ಸಾಲಿನಲ್ಲಿ 1ನೇ ತರಗತಿಯಲ್ಲಿ ದಾಖಲಾದ ಮಕ್ಕಳ ಸಂಖ್ಯೆ– 593572

2012–13 ನೇ ಸಾಲಿನಲ್ಲಿ 1 ನೇ ತರಗತಿಯಲ್ಲಿ ದಾಖಲಾದ ಮಕ್ಕಳ ಸಂಖ್ಯೆ– 585775

2013–14 ನೇ ಸಾಲಿನಲ್ಲಿ 1ನೇ ತರಗತಿಯಲ್ಲಿ ದಾಖಲಾದ ಮಕ್ಕಳ ಸಂಖ್ಯೆ– 572287